# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1572 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 24.09.2021. |
| ಉತ್ತರಿಸುವ ಸಚಿವರು | : | ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಹಾವೇರಿ ಜಿಲ್ಲೆಯಲ್ಲಿ ಬೆಂಬಲ ಬೆಲೆ ಅಡಿಯಲ್ಲಿ ಭತ್ತ ಖರೀದಿ ಕೇಂದ್ರಗಳ ಮೂಲಕ ಖರೀದಿಸಲ್ಪಟ್ಟ ಭತ್ತಕ್ಕೆ 03 ದಿನಗೊಳಗಾಗಿ ರೈತರ ಖಾತೆಗೆ ಹಣವನ್ನು ಜಮಾ ಮಾಡಬೇಕೆನ್ನುವುದು ಸರ್ಕಾರದ ನಿಯಮವೇ; | ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಭತ್ತವನ್ನು ನೊಂದಾಯಿತ ಅಕ್ಕಿ ಗಿರಣಿಗಳ ಮೂಲಕ ಸಂಗ್ರಹಿಸಲಾಗುತ್ತದೆ. ರೈತರಿಂದ ಖರೀದಿಸಲಾದ ಭತ್ತದ ವಿವರವನ್ನು ಅಕ್ಕಿ ಗಿರಣಿ ಮಾಲೀಕರು ಸಂಗ್ರಹಣಾ ಏಜೆನ್ಸಿಗಳಿಗೆ ನೀಡಿದ ಮೂರು ದಿನಗಳೊಳಗಾಗಿ ರೈತರ ಬ್ಯಾಂಕ್ ಖಾತೆಗೆ ಹಣವನ್ನು ವರ್ಗಾವಣೆ ಮಾಡಬೇಕಾಗಿರುತ್ತದೆ. |
| (ಆ) | ಹಾಗಿದ್ದಲ್ಲಿ, ಹಾವೇರಿ ಜಿಲ್ಲೆಯಲ್ಲಿ ಬೆಂಬಲ ಬೆಲೆ ಅಡಿಯಲ್ಲಿ ಭತ್ತ ಖರೀದಿ ಕೇಂದ್ರಗಳ ಮೂಲಕ ಖರೀದಿಸಲ್ಪಟ್ಟ ಭತ್ತಕ್ಕೆ ಕಳೆದ 03 ತಿಂಗಳಾದರೂ ರೈತರ ಖಾತೆಗೆ ಹಣ ಜಮೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹಾವೇರಿ ಜಿಲ್ಲೆಯಲ್ಲಿ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ 2150 ರೈತರಿಂದ 1,15,059.67 ಕ್ವಿಂಟಾಲ್ ಭತ್ತವನ್ನು ಖರೀದಿಸಲಾಗಿದ್ದು ಎಲ್ಲಾ 2150 ರೈತರಿಗೆ ರೂ.21.56 ಕೋಟಿ ಮೊತ್ತವನ್ನು ಡಿ.ಬಿ.ಟಿ ಮೂಲಕ ಪಾವತಿಸಲಾಗಿರುತ್ತದೆ. |
| (ಇ) | ಹಾವೇರಿ ಜಿಲ್ಲೆಯಲ್ಲಿ ಬೆಂಬಲ ಬೆಲೆ ಅಡಿಯಲ್ಲಿ ಭತ್ತ ಖರೀದಿ ಕೇಂದ್ರಗಳ ಮೂಲಕ ಖರೀದಿಸಲ್ಪಟ್ಟ ಭತ್ತಕ್ಕೆ ಹಣವನ್ನು ರೈತರ ಖಾತೆಗೆ ಜಮೆ ಮಾಡಲು ಸರ್ಕಾರಕ್ಕೆ ಬೇಕಾಗುವ ಕಾಲಾವಕಾಶವೆಷ್ಟು? | ಉದ್ಭವಿಸುವುದಿಲ್ಲ. |

ಆನಾಸ 91 ಆರ್‌ಪಿಆರ್ 2021 (ಇ-ಆಫೀಸ್)

(ಉಮೇಶ್ ವಿ. ಕತ್ತಿ)
ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು